**ಪೂರ್ವಭಾಷಿಗೆ ಶರಣು...**

ಕವಿರಾಜಮಾರ್ಗಕಾರ ಬಣ್ಣಿಸಿದ ಕಾಲದ ಕನ್ನಡ ಜನಪದದಲ್ಲಿ ನ್ಯಾಯಯುತ ಹಕ್ಕು ಪ್ರತಿಪಾದಿಸಿದವರ ಕೈ ಕಡಿಯುವುದು, ಪ್ರತಿಭಟಿಸುವವರ ಹತ್ಯೆಗೈಯುವುದು, ಪ್ರಶ್ನಿಸುವವರ ಮುಖಕ್ಕೆ ಮಸಿ, ಸಗಣಿ ಬಳಿಯುವುದು ಇತ್ತೋ ಇಲ್ಲವೋ, ಆದರೆ ಈಗ ಕನ್ನಡ ನುಡಿಯಂತೇ ಕನ್ನಡ ಜನಪದವೂ ಆತಂಕ, ಅಭದ್ರತೆಯನ್ನೆದುರಿಸುತ್ತಿದೆ. ಕವಿರಾಜಮಾರ್ಗಕಾರನ ಕಾಲ ಕುರಿತು ಅಧ್ಯಯನ ನಡೆಸಿದ ಕನ್ನಡ ದನಿಯೊಂದನ್ನು ಬಲವಂತದ ಮೌನಕ್ಕೆ ದೂಡಲಾಗಿದೆ.

ಹೌದು. ೭೭ ವರ್ಷದ ಎಂ. ಎಂ. ಕಲಬುರ್ಗಿಯವರನ್ನು ಧಾರವಾಡದಲ್ಲಿ ೨೦೧೫, ಆಗಸ್ಟ್ ೩೦ರಂದು ಗುಂಡಿಟ್ಟು ಕೊಲ್ಲಲಾಯಿತು. ಹಿಂದೂ-ಲಿಂಗಾಯತ-ವೀರಶೈವ ಧರ್ಮ ಕುರಿತು ಕೆಲವು ಅಪ್ರಿಯ ವಾದಗಳ ಕಟ್ಟಾ ಪ್ರತಿಪಾದಕರಾಗಿದ್ದ; ವೀರಶೈವ ಮಠ-ಗುರುಗಳನ್ನು ಬಸವಣ್ಣನ ಕೊಲೆಗಾರರೆಂದು ಟೀಕಿಸುತ್ತಿದ್ದ; ಕನ್ನಡ ಜನ ಬದುಕಿನ ದೇಸೀ ಆಕರಗಳನ್ನು ಹುಡುಕಿ, ಅರ್ಥೈಸಿ, ವಿಶ್ಲೇಷಣೆಗೆ ಒಡ್ಡುತ್ತಿದ್ದ ಸತ್ಯನಿಷ್ಠ ಸಂಶೋಧಕನ ಬದುಕನ್ನು ಅನುಚಿತ ರೀತಿಯಲ್ಲಿ ಕೊನೆಗೊಳಿಸಲಾಯಿತು. ಗುರುವೇ ಎಂದು ಒಳಬಂದವರೇ ಗುಂಡು ಹಾಕಿ ಹೋದರು. ಇದುವರೆಗೆ ಅಲ್ಲೆಲ್ಲೋ ಸಂಭವಿಸುತ್ತಿದ್ದದ್ದು ಇಂದು ನಮ್ಮಂಗಳದಲ್ಲೇ ಸಂಭವಿಸಿ ಪ್ರಜ್ಞಾವಂತರು ದಿಗ್ಭ್ರಮೆಗೊಂಡರು. ಅವರ ಹತ್ಯೆಯನ್ನು ದೇಶಾದ್ಯಂತ ಸಾಹಿತಿ-ಚಿಂತಕರು ಖಂಡಿಸಿದರು. ಜಿ. ಎನ್. ದೇವಿ, ಕನ್ನಡದ ಚಂಪಾ, ಆರು ಉದಯೋನ್ಮುಖ ಕವಿಗಳು, ಹಿಂದಿ ಲೇಖಕ ಉದಯಪ್ರಕಾಶ್, ಸೇರಿದಂತೆ ಹಲವರು ತಮ್ಮ ಪ್ರಶಸ್ತಿ, ಪಾರಿತೋಷಕಗಳನ್ನು ಹಿಂತಿರುಗಿಸಿದರು. ಅತಿದುಃಖದ, ಅತಿ ಆಕ್ರೋಶದ ಪ್ರತಿಕ್ರಿಯೆಗಳು ಕೇಳಿಬಂದ ಬೆನ್ನಲ್ಲೇ 'ಎಲ್ಲ ಅತಿಯಾಯಿತು, ಸುಮ್ಮನಿರಿ' ಎಂಬ ಧಾಟಿಯ ಅತಿ ನ್ಯೂಟ್ರಲ್ ಪ್ರತಿಕ್ರಿಯೆಗಳೂ ಕೇಳಿಬಂದವು. ಯಾವ ಪುರೋಹಿತಶಾಹಿಯನ್ನು ಕಲಬುರ್ಗಿ ಟೀಕಿಸುತ್ತಿದ್ದರೋ ಅದರ ಮುಂದುವರೆದ ಕೊಂಡಿಗಳಂತಿದ್ದ ಮಠ, ಟ್ರಸ್ಟ್, ಸಂಸ್ಥೆಗಳೊಂದಿಗೆ ಕಲ್ಬುರ್ಗಿಯವರಿಗಿದ್ದ ಸೌಹಾರ್ದ ಸಂಬಂಧ-ಒಡನಾಟವನ್ನು ನೆನೆಸಿಕೊಂಡು ಕೆಲವರು ಕಸಿವಿಸಿಗೊಂಡರು. ಒಟ್ಟಾರೆ ಅವರವರ ಭಾವ, ಭಕುತಿಗೆ ತಕ್ಕಂತೆ ಕಲ್ಬುರ್ಗಿಯವರನ್ನು ಜನ ನೆನಪಿಸಿಕೊಂಡರು, ದುಃಖಗೊಂಡರು, ಆಕ್ರೋಶಗೊಂಡರು.

ಆದರೆ ಎಲ್ಲಕ್ಕಿಂತ ವಿಲಕ್ಷಣವಾಗಿ ಕರಾವಳಿ ಮತ್ತಿತರ ಕಡೆಗಳಲ್ಲಿ ಅವರು ಬರೆದ ಒಂದಕ್ಷರವನ್ನೂ ಓದಿರದ ಧರ್ಮಾಂಧರಿಂದ ಸಂಭ್ರಮದ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಧರ್ಮದ್ರೋಹಿಗೆ ತಕ್ಕ ಶಾಸ್ತಿಯಾಯಿತು ಎಂದು ಜಾಲತಾಣಗಳಲ್ಲಿ ಕಮೆಂಟುಗಳು ಬಂದವು. ಮುಂದಿನ ಸರದಿ ಯಾರದು ಎಂದೂ ಹಿಟ್‌ಲಿಸ್ಟ್ ಬಿಡುಗಡೆ ಮಾಡಲಾಯಿತು. ಅದರ ಆಧಾರದ ಮೇಲೆ ಕೆಲವರ ಬಂಧನ, ಬಿಡುಗಡೆಯೂ ಆಯಿತು.

ಅಂತರ್ಜಾಲದಲ್ಲಿ ಹಿಟ್‌ಲಿಸ್ಟ್?! ಹೌದು. ಇವತ್ತು ಸ್ಥಳೀಯ, ಅಂತಾರಾಷ್ಟ್ರೀಯ ಘಟನೆ ತೀವ್ರಗಾಮಿ ಮನಸುಗಳಲ್ಲಿ ಯಾವ ತೆರನ ಪ್ರತಿಕ್ರಿಯೆ ಹುಟ್ಟುಹಾಕುತ್ತದೆ ಎಂದು ನೋಡಲು ಅಂತರ್ಜಾಲ ಗಮನಿಸಬೇಕು. ಅಂತರ್ಜಾಲವು ಕಲಿತ, ತರುಣ ಪೀಳಿಗೆಯ, ಒಂದು ವರ್ಗದ ಮನಸ್ಥಿತಿಯ ಪ್ರತಿಬಿಂಬವಾಗಿದ್ದು ಶಿಷ್ಟರೆಂದುಕೊಂಡವರ ದುಷ್ಟತನವನ್ನು ಅನಾವರಣಗೊಳಿಸುವ ಮಾಧ್ಯಮವಾಗಿದೆ. ಕೆರಳಿದ ಹಾಗೂ ಅಸಹನೆಯ ಸಮಾಜ ಸೃಷ್ಟಿಸುವಲ್ಲಿ ಮಾಧ್ಯಮ ಮತ್ತು ಅಂತರ್ಜಾಲದ ಮಹತ್ವದ ಪಾತ್ರವಿದೆ. ಭಾರತದಲ್ಲಂತೂ ಅಂತರ್ಜಾಲದ ಕಮೆಂಟಿಗರ ಪಡೆಯೇ ಸೃಷ್ಟಿಯಾಗಿದ್ದು ಮುಕ್ತ ವಿಚಾರಗಳನ್ನು, ಅದರ ಪ್ರತಿಪಾದಕರನ್ನು ಅದು ಮನಬಂದಂತೆ ಹಣಿಯುತ್ತದೆ. ಧರ್ಮ, ದೇವರು, ಜಾತಿ, ದೇಶ, ಭಾಷೆ ಕುರಿತ ಸಣ್ಣ ವಿಮರ್ಶೆ, ಟೀಕೆಯೂ ಸಮಾಜದಲ್ಲಿ ಎಂತೋ ಅಂತೆಯೇ ಅಂತರ್ಜಾಲ ತಾಣದಲ್ಲೂ ಅತಿವೇಗದ ತೀವ್ರ ಪ್ರತಿಕ್ರಿಯೆ ಹುಟ್ಟುಹಾಕುತ್ತಿದೆ. ಅಂತರ್ಜಾಲಿಗರ ಉಗ್ರ ಗುಂಪು ಒಂದು ಆರೋಗ್ಯಕರ ಚರ್ಚೆ ನಡೆಯುವುದೇ ಸಾಧ್ಯವಾಗದಂತೆ ಮಾಡುತ್ತ ಬೀದಿಹೋರಾಟದಷ್ಟೆ ಭರಾಟೆಯಿಂದ ಜಾಲಿಗರ ಕಾಳಗ ನಡೆಸುತ್ತದೆ.

ಇವತ್ತು ಎಲ್ಲ ದೇಶ, ಧರ್ಮಗಳಲ್ಲೂ ಈ ಉನ್ಮಾದದ ಮನಸ್ಥಿತಿ ಇದೆ. ಇದು ಇದ್ದಕ್ಕಿದ್ದಂತೆ ಸೃಷ್ಟಿಯಾದದ್ದಲ್ಲ. ಅದಕ್ಕೆ ಪ್ರಸಕ್ತ ರಾಜಕೀಯ ಹುಟ್ಟುಹಾಕುವ ಸಾಮಾಜಿಕ ಹಾಗೂ ಹುಸಿ ಧಾರ್ಮಿಕತೆಯ ವಾತಾವರಣ ಕಾರಣವಾಗಿದೆ. ಹಿಂಸೆಯನ್ನು ವೈಭವೀಕರಿಸುವ, ಒಪ್ಪಿಕೊಳ್ಳುವ ಮನಸ್ಥಿತಿಯನ್ನು ಅದು ಸೃಷ್ಟಿಸುತ್ತಲಿದೆ. ಇದು ಕಲಬುರ್ಗಿ ಹಂತಕರನ್ನಷ್ಟೇ ಅಲ್ಲ; ಪೆರುಮಾಳ್ ಮುರುಗನ್, ಶಿರೀನ್ ದಳವಿ, ಬಿನಾಯಕ್ ಸೇನ್, ತೀಸ್ತಾ, ಸಂಜೀವ ಭಟ್ ಮುಂತಾದ ಎಷ್ಟೋ ಸಂವೇದನಾಶೀಲರ ಅಭಿವ್ಯಕ್ತಿಯ ಕೊಲೆಗಾರರನ್ನೂ ಸೃಷ್ಟಿಸಿದೆ.

ಕಲಬುರ್ಗಿ ಹತ್ಯೆ ನಡೆದು ಎರಡು ವರ್ಷವಾಯಿತು. ಅವರು ಬಸವಣ್ಣನ ಧರ್ಮವನ್ನು, ಲಿಂಗಾಯತ ಧರ್ಮವನ್ನು ಪ್ರತಿಪಾದಿಸುತ್ತಿದ್ದುದರಿಂದ ಸನಾತನ ಮಠವ್ಯವಸ್ಥೆಗಳ ಕೆಂಗಣ್ಣಿಗೆ ಗುರಿಯಾಗಿ ಕೊಲೆಯಾಗಿರಬಹುದು ಎಂದು ಶಂಕಿಸಲಾಗಿತ್ತು. ಯಾವ ಬಸವನ ಧರ್ಮವನ್ನು ಅವರು ಪ್ರತಿಪಾದಿಸುತ್ತಿದ್ದರೋ, ಅದೇ ಇವತ್ತು ಲಿಂಗಾಯತ ಧರ್ಮವೆಂಬ ಸಾಂವಿಧಾನಿಕ ಮಾನ್ಯತೆ ಪಡೆಯಲು ಕಸರತ್ತುಗಳು ಶುರುವಾಗಿವೆ. ಈ ಹಿನ್ನೆಲೆಯಲ್ಲಿ ಕೆಲ ಅಂಶಗಳನ್ನು ಗಮನಿಸಬಹುದು:

- ಕಲಬುರ್ಗಿ ಅವರ ಹತ್ಯೆಯ ತನಿಖೆ ಇನ್ನೂ ಪೂರ್ಣಗೊಂಡಿಲ್ಲ. ಒಟ್ಟಾರೆ ಇದು ವಿಚಾರ ವಿರೋಧಿಗಳ ಕೃತ್ಯ ಎನ್ನುವುದು ಓಪನ್ ಸೀಕ್ರೆಟ್. ಕಲಬುರ್ಗಿಯವರ ಸಮಕಾಲೀನರೂ, ಸಹವರ್ತಿಗಳೂ ಆಗಿದ್ದ, ಅವರಂತೇ ಮಠ-ಪೀಠ ವ್ಯವಸ್ಥೆಗಳನ್ನು ಟೀಕಿಸುತ್ತಿದ್ದ ಲಿಂಗಣ್ಣ ಸತ್ಯಂಪೇಟೆ ಅನುಮಾನಾಸ್ಪದವಾಗಿ ಕೊಲೆಯಾಗಿದ್ದರು. ಕಲಬುರ್ಗಿಯವರಿಗೂ ಪ್ರಾಣ ಬೆದರಿಕೆಯ ಕರೆಗಳು ಬಂದು ಕೆಲವು ದಿನ ಪೊಲೀಸ್ ರಕ್ಷಣೆ ಒದಗಿಸಲಾಗಿತ್ತು. ಪೊಲೀಸ್ ರಕ್ಷಣೆ ಬೇಡವೆಂದು ಅವರೇ ನಿರಾಕರಿಸಿದ ಮೇಲೆ ಹತ್ಯೆ ಸಂಭವಿಸಿದೆ. ಆದರೆ ಹತ್ಯೆ ಆದದ್ದು ಮೂಲಭೂತವಾದಿಗಳಿಂದಲೇ ಎಂದುಕೊಳ್ಳುವುದಾದರೆ ಅವರು ಬಹಳ ಸಾಫ್ಟ್ ಟಾರ್ಗೆಟ್ ಆಗಿದ್ದರು. ಅವರಿಗಿಂತ ಖಂಡತುಂಡ ಮಾತುಗಳಲ್ಲಿ ಮೂಲಭೂತವಾದದ ಎಲ್ಲ ಮಗ್ಗುಲು, ಆಯಾಮಗಳನ್ನು ಟೀಕಿಸುವ ಹತ್ತಾರು ಲೇಖಕರು, ಚಿಂತಕರು, ಹೋರಾಟಗಾರರು ಕನ್ನಡದಲ್ಲಿದ್ದಾರೆ. ಆದರೂ ಕಲ್ಬುರ್ಗಿಯವರನ್ನೇ ಏಕೆ ಆಯ್ದುಕೊಳ್ಳಲಾಯಿತು? ಇದು ಅಪರಾಧ ಸಂಹಿತೆಯ ಒಳಸೂಕ್ಷ್ಮಗಳಿಗೆ ನಮ್ಮನ್ನು ಕೊಂಡೊಯ್ಯುತ್ತದೆ. ಯಾವಾಗಲೂ ವ್ಯವಸ್ಥೆಗೆ ಒಳಗಿದ್ದು ವಿರುದ್ಧ ಮಾತನಾಡುವ 'ಕ್ರಿಟಿಕಲ್ ಇನ್‌ಸೈಡರ್ಸ್'

ಮೇಲೆ ಹೆಚ್ಚು ಸಿಟ್ಟಿರುತ್ತದೆ. ಉದಾಹರಣೆಗೆ ನಾನು ಹಿಂದೂ ಎಂದು ಅದರ ಒಳಹುಳುಕುಗಳ ಕುರಿತು ಹೇಳುವ ಗಾಂಧಿ ಹಿಂದೂ ಉಗ್ರಗಾಮಿಗಳಿಂದ ಕೊಲ್ಲಲ್ಪಡುತ್ತಾರೆ. ಹಂತಕ ವ್ಯವಸ್ಥೆ ಉಳಿದವರನ್ನು ಭಯಗೊಳಿಸುವ ಸಲುವಾಗಿ ಸಾಫ್ಟ್ ಟಾರ್ಗೆಟ್‌ಗಳನ್ನೇ ಆಯ್ದುಕೊಳ್ಳುತ್ತದೆ.

- ಇವತ್ತು ಕಾಲ ನಾವು ತಿಳಿದಷ್ಟು ಅಮಾಯಕವಾಗಿಲ್ಲ. ಮೂಲಭೂತವಾದದ ಹುನ್ನಾರಗಳಿಗೆ ಅಂತರಂಗದ ಮಾತು, ಸ್ಪಷ್ಟತೆ, ನಿರ್ಭಯ ಸ್ವತಂತ್ರ ಪ್ರವೃತ್ತಿಗಳೆಲ್ಲ ಬಲಿಯಾಗುತ್ತಿವೆ. ಅಭಿವ್ಯಕ್ತಿ ಸ್ವಾತಂತ್ರ್ಯ ಕುರಿತು ಹಿರಿಕಿರಿಯರೆನ್ನದೆ ನಾವೆಲ್ಲ ಮಾತನಾಡುತ್ತೇವೆ. ಆದರೆ ಯಾವ ಮೂಲಭೂತವಾದ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುತ್ತಿದೆಯೊ ಅದರ ಸಾಂಸ್ಕೃತಿಕ ಮುಖವಾಡ ಅರಿಯಲು, ಅದರ ನಾನಾವೇಷಗಳನ್ನು ಗುರುತಿಸಲು ನಾವು ವಿಫಲರಾಗಿದ್ದೇವೆ. ಕಲಬುರ್ಗಿಯವರಂಥ ಹಿರಿಯ ಚಿಂತಕ, ಸಾಹಿತಿಗಳೂ ಇದರಿಂದ ಹೊರತಲ್ಲ. ಕೆಲ ಚಿಂತಕರು ಸಂಘಟಕರ ಥಳುಕುಬಳುಕು, ಶಿಸ್ತು, ಸಿರಿಗಳಿಗೆ ಮಾರುಹೋಗಿ ಜನವಿದ್ದಲ್ಲೆಲ್ಲ ಜಾತ್ರೆ ಎಂದುಕೊಂಡು ಬಂಡವಾಳಿಗರ ಸಹಾಯದಿಂದ ನಡೆವ ಲಿಟ್‌ಫೆಸ್ಟ್‌ಗಳಿಗೆ ಎಡತಾಕುತ್ತಾರೆ. ಆದರೆ ಅಂತಹ ಅದ್ದೂರಿ ಜಾತ್ರೆಗಳಲ್ಲಿ ನಮ್ಮ ಮನೆದೇವರಾದ ಕಲ್ಲುದೈವಗಳಿರುವುದಿಲ್ಲ; ಬರಿ ಉತ್ಸವ ಮೂರ್ತಿಗಳೇ ಇರುತ್ತವೆ. ಅಷ್ಟೇ ಅಲ್ಲ, ಹಂಗಿನರಮನೆಯು ತನ್ನಲ್ಲಿ ಬಂದುಹೋದವರ ಹೆಸರನ್ನು ತನ್ನ ಲಾಭಕ್ಕೆ ಬಳಸಿಕೊಳ್ಳುವುದೂ ನಿಜವಾಗಿದೆ.
- ಕಲಬುರ್ಗಿ ಹತ್ಯೆ ಖಂಡಿಸಿ ರಾಜಧಾನಿಯಲ್ಲಿ ಹಾಗೂ ಧಾರವಾಡ-ಉತ್ತರ ಕರ್ನಾಟಕದಲ್ಲಿ ಪ್ರತಿಭಟನೆ, ಖಂಡನೆ ವ್ಯಕ್ತವಾಗುತ್ತಿದೆ. ಧಾರವಾಡ ಕೇಂದ್ರಿತ ಆಗುಹೋಗುಗಳು ತನಿಖಾ ವ್ಯವಸ್ಥೆ ಚುರುಕಾಗುವಂತೆ ಒತ್ತಡ ಸೃಷ್ಟಿಸುತ್ತಿವೆ. ಕಲಬುರ್ಗಿಯವರೊಡನೆ ನಿತ್ಯ ಒಡನಾಡಿದವರು ಸದ್ಯದ ಆಘಾತ ಹಾಗೂ ನಾಳೆಯ ಜವಾಬ್ದಾರಿಗಳೆರಡರ ಸಮತೋಲ ಕಾಯ್ದುಕೊಳ್ಳುತ್ತ ಹತ್ಯೆ ವಿರೋಧಿ ಸಮಿತಿ ರಚನೆಯಾಗಿ ನ್ಯಾಯದ ಆಗ್ರಹಕ್ಕೆ ಹೋರಾಟದ ಸ್ವರೂಪ ನೀಡಲಾಗುತ್ತಿದೆ. ಅದೇವೇಳೆಗೆ ರಾಷ್ಟ್ರಭಕ್ತ ಚಿಂತಕರ ಪಡೆ ಪ್ರಪಂಚದ ಬೇರಾವುದೇ ದೇಶದಲ್ಲಿಲ್ಲದಷ್ಟು ಅಭಿವ್ಯಕ್ತಿ ಸ್ವಾತಂತ್ರ್ಯ ಭಾರತದಲ್ಲಿದೆ; ಅಭಿವ್ಯಕ್ತಿ ಸ್ವಾತಂತ್ರ್ಯ ಹರಣ ಎನ್ನುವುದೆಲ್ಲ ಬುದ್ಧಿಜೀವಿಗಳ ಅನಗತ್ಯ ಬೊಗಳೆ ಎಂದು ಬೆನ್ನು ನೀವಿಕೊಳ್ಳುತ್ತಿದೆ. ಅದು ಅವರ ಅನುಭವವಾಗಿ ನಿಜವಿರಬಹುದು. ಯಾಕೆಂದರೆ ವ್ಯವಸ್ಥೆಯ/ಧರ್ಮ-ಜಾತಿಯ ಪರವಾಗಿ ನೀವಿರುವುದಾದರೆ ಭಾರತದಲ್ಲಿ ಹೇರಳ ಅಭಿವ್ಯಕ್ತಿ ಸ್ವಾತಂತ್ರ್ಯವಿದೆ. ಆದರೆ ಯಥಾಸ್ಥಿತಿಯನ್ನು ಒಪ್ಪದೆ ಹೊಸವಿಚಾರ ಪ್ರತಿಪಾದಿಸುವವರಿಗಷ್ಟೆ ಅದರ ಇತಿಮಿತಿಗಳೇನೆಂದು ಅರಿವಾಗುತ್ತದೆ.
- ಯಾವುದೇ ಸರ್ಕಾರವಿರಲಿ, ಎಂಥ ಗಹನ ಅಪರಾಧವೇ ಇರಲಿ, ಅದು ಪ್ರಭಾವೀ ಧರ್ಮ/ಜಾತಿ/ಪಕ್ಷದ ವ್ಯಕ್ತಿಗೆ ಸಂಬಂಧಿಸಿದ್ದಾದರೆ ಹೇಗೆ ಮುಚ್ಚಿ ಹೋಗುತ್ತಿದೆಯೆಂದು ನಾವು ನೋಡುತ್ತಿದ್ದೇವೆ. ನಮ್ಮ ತನಿಖಾ ತಂಡದ ನಾಯಿಗಳಾದರೋ ವಾಸನೆ ಮೂಸುತ್ತ ಮೂಸುತ್ತ ಒಂದು ಸರ್ಕಲಿನಲ್ಲೋ, ಬಸ್‌ಸ್ಟ್ಯಾಂಡ್-ರೈಲ್ವೆ ಸ್ಟೇಷನಿನಲ್ಲೊ ನಿಂತುಬಿಡುತ್ತವೆ. ಅಲ್ಲಿಂದ ಮುಂದೆ ವಿಶಾಲ ಬಯಲೂ, ಅದರ ತುಂಬ ಗವಿ-ಬಿಲ-ಗುಹೆಗಳೂ ಇದ್ದು ಅಲ್ಲಿ ಸಾಕ್ಷಿಯೆಂಬ ಇರುವೆಯನ್ನು ಹುಡುಕುವುದೇ ಕಷ್ಟವಾಗಿದೆ. ಗುಂಡು ಹಾರಿಸಿದ ಶಾರ್ಪ್ ಶೂಟರುಗಳ ಸುಳಿವು ದೊರೆತೀತು. ಅವರಿಗೆ ಕಾಸು ಕೊಟ್ಟ ರೌಡಿಯ ಸುಳಿವು ದೊರೆತೀತು. ಆದರೆ ಆ ರೌಡಿಯನ್ನು ಸಾಕಿಕೊಂಡ ಅಪ್ಪಅಮ್ಮಗಳ ಬಗೆಗೆ ಯಾವ ಸಾಕ್ಷಿಯೂ ದೊರೆಯುವುದಿಲ್ಲ. ದೊರೆತರೂ ಕ್ರಮ ಕೈಗೊಳ್ಳುವುದು ಸಾಧ್ಯವಾಗುತ್ತಿಲ್ಲ. ಪ್ರಭಾವೀ ವ್ಯಕ್ತಿಯವರೆಗೆ ಬಂದುನಿಂತು ತನಿಖೆ 'ಇಲ್ಲಿಗೀ ಕತೆ ಮುಗಿಯಿತು' ಎಂದು ಅಪೂರ್ಣಗೊಳ್ಳುವುದೇ ಜಾಸ್ತಿಯಾಗಿದೆ. ಲಿಂಗಣ್ಣ ಸತ್ಯಂಪೇಟೆ ಅವರ ಶವ ಚರಂಡಿಯಲ್ಲಿ ಅರೆನಗ್ನಾವಸ್ಥೆಯಲ್ಲಿ ಪತ್ತೆಯಾಗಿ; ನರೇಂದ್ರ ಧಾಬೋಲ್ಕರ್, ಪನ್ಸಾರೆ ಹತ್ಯೆಯಾಗಿ ವರ್ಷಗಳೇ ಉರುಳಿದರೂ ಹಂತಕರ ಸುಳಿವು ಸಿಗದಿರುವುದು ನಮ್ಮ ಕಣ್ಣೆದುರಿಗಿದೆ.

ಹೀಗಿರುತ್ತ ಹತ್ಯೆ ಖಂಡಿಸಿ ಬರಹಗಾರರು, ಚಿಂತಕರು ಸಭೆ ನಡೆಸಿ, ತಮಗೆ ದೊರಕಿದ ಪ್ರಶಸ್ತಿ ಸಮ್ಮಾನಗಳನ್ನು ನಿರಾಕರಿಸಿದ್ದು ತನಿಖೆ ಚುರುಕುಗೊಳ್ಳುವಂತೆ ಒತ್ತಡ ಸೃಷ್ಟಿಸುವಲ್ಲಿ ಯಶಸ್ವಿಯಾಗಿದೆ. ಬಹುಪಾಲು ಅಪರಾಧ ತನಿಖೆಗಳೆಲ್ಲ ನಾನಾ ಕಾರಣಗಳಿಗಾಗಿ ಹಳ್ಳ ಹಿಡಿಯುತ್ತಿರುವಾಗ ಜಡಭರತ ವ್ಯವಸ್ಥೆಯ ಮೇಲೆ ಒತ್ತಡ ತರುವ ಸಲುವಾಗಿ ನಿರಂತರ ಹೋರಾಟ, ನ್ಯಾಯ ದೊರೆಯುವವರೆಗೆ ಹೋರಾಟ ಅಗತ್ಯವಾಗಿದೆ. ಎಂದೇ ಕಲಬುರ್ಗಿಯವರ ಹತ್ಯೆಯ ಸಂದರ್ಭದಲ್ಲಿ ಹಿರಿಕಿರಿಯರು ಭಿನ್ನಭೇದ ಮರೆತು ಒಟ್ಟಾಗಿ ಜಿಲ್ಲಾಮಟ್ಟದ ಧರಣಿ, ರ್‍ಯಾಲಿ, ಪ್ರತಿಭಟನೆ, ಫೇಸ್ಬುಕ್ ಅಭಿಯಾನ ಕೈಗೊಂಡಿದ್ದಾರೆ. ಹಂತಕರನ್ನು ಗುರುತಿಸುವಂತೆ; ಹಂತಕ ವ್ಯವಸ್ಥೆಯ ಬೇರುಗಳನ್ನು ಬುಡಮಟ್ಟ ಕಿತ್ತುಹಾಕುವಂತೆ ಒತ್ತಾಯಿಸುತ್ತಿದ್ದಾರೆ.

ವಿಚಾರಕ್ಕೆ ವಿಚಾರ ಉತ್ತರವಾಗಬೇಕೇ ವಿನಹ ಹತ್ಯೆಯಲ್ಲ; ಹತ್ಯೆ ಹೇಡಿಗಳ ಕೆಲಸ. ಜೀವಮಾನವಿಡೀ ಕಲಬುರ್ಗಿಯವರು ಸಂಸ್ಥೆಗಳನ್ನು ಕಟ್ಟಿ ಬೆಳೆಸಿದ್ದರು. ಅವರ ಮರಣವೂ ಜಾಗ್ರತ ಗುಂಪುಗಳು ಕ್ರಿಯಾಶೀಲವಾಗುವಂತೆ ಮಾಡಿರುವುದು 'ಶರಣರ ಗುಣವನ್ನು ಮರಣದಲ್ಲಿ ಕಾಣು' ಎಂಬ ಮಾತು ನಿಜಗೊಳ್ಳುವಂತೆ ಮಾಡಿದೆ. ಕಲ್ಬುರ್ಗಿಯವರನ್ನು ಮೌನವಾಗಿಸಿರುವೆವೆಂದು ಯಾರೂ ಬೀಗದಿರಲಿ, ಇದುವರೆಗೆ ಬಾಯಿಗೆ ಬೀಗ ಹಾಕಿಕೊಂಡವರ ನಾಲಿಗೆಗಳಲ್ಲೂ ಕಲಬುರ್ಗಿ ನುಡಿಯತೊಡಗಿದ್ದಾರೆ!

***

ಮನುಷ್ಯ ದೇಹ ಅಮರವಲ್ಲ. ಅವನ ಚೇತನ ಕಾಲದ ಸರಪಳಿಯಲ್ಲಿ ಭಾಷೆಯ ಒಂದು ಕೊಂಡಿ. ಒಬ್ಬ ಬರಹಗಾರನ ಸಾವು ಕೇವಲ ಒಂದು ಮಾನವ ಜೀವದ ಇಲ್ಲವಾಗುವಿಕೆಯಲ್ಲ. ಅದು ಒಂದು ಭಾಷೆಯ ಒಂದು ಸಂವೇದನೆಯ ಸಾವು. ಬರಹಗಾರನೆಂದರೆ ಕೇವಲ ಒಬ್ಬ ವ್ಯಕ್ತಿಯಲ್ಲ, ದೇಹವಲ್ಲ, ಆತ ಅವನಂತೆ ಯೋಚಿಸುವ ಒಂದು ಸಮುದಾಯದ, ಒಂದು ತಲೆಮಾರಿನ ಪ್ರತಿನಿಧಿ. ಬರವಣಿಗೆ ಎಂದರೆ ಆಡದವರ ಮಾತು, ಕಾಣದವರ ಕಣ್ಣು.

ವಾಲ್ಮೀಕಿ ರಾಮನ ಕುರಿತು 'ಪೂರ್ವಭಾಷಿ' ಎನ್ನುತ್ತಾನೆ. ಎದುರಿರುವವರು ಆಡಲಾರದ, ಅನುಭವಿಸಲಾರದ ಸಂಕಟಗಳಿಗೆ ಮಾತಿನ ರೂಪ ಕೊಟ್ಟು ಅವರಿಗಿಂತ ಮೊದಲೇ ಆಡುವವ ಪೂರ್ವಭಾಷಿ. ಎಂದೇ ಬರಹಗಾರರೂ ಪೂರ್ವಭಾಷಿಗಳು. ಅದರಲ್ಲೂ ಸಂಶೋಧಕನ ಸ್ಥಾನ ಕವಿಗಿಂತ, ಬರಹಗಾರನಿಗಿಂತ ವಿಭಿನ್ನ ಹಾಗೂ

ವಿಶಿಷ್ಟ. ಸತ್ಯನಿಷ್ಠುರಿಯಾಗಿ ಚರಿತ್ರೆ ತಿಳಿಯಬೇಕಾದ, ತಿಳಿಸಬೇಕಾದ ಜವಾಬ್ದಾರಿ ಸಂಶೋಧಕರ ಹೆಗಲ ಮೇಲಿರುತ್ತದೆ. ಎಂದೇ ದಿಟ್ಟವಾಗಿ, ವಿಶಿಷ್ಟವಾಗಿ ಚರಿತ್ರೆಯ ಮೂಲ ಆಕರಗಳನ್ನೇ ಶೋಧಿಸುತ್ತ ನಡೆದಿದ್ದ; ನಾನೆಂದೂ ನೋಡಿರದ, ಮಾತನಾಡಿರದ, ಕಲಬುರ್ಗಿಯವರ ಸಾವು ಒಳಗೊಂದು ತಂತಿ ಕಡಿದ ಅನುಭವ ಹುಟ್ಟಿಸುತ್ತಿದೆ.

ಅಳಿವಿರದ ಚೇತನವೇ, ಇಡುವ ಹೆಜ್ಜೆಗಳಲಿಷ್ಟು ಸತ್ಯದ ಕಸುವು ತುಂಬು, ನಮಸ್ಕಾರ..

- ಡಾ. ಎಚ್. ಎಸ್. ಅನುಪಮಾ